ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಸೋಮವಾರ, ದಿನಾಂಕ : 21 ನೇ ಸೆಪ್ಟೆಂಬರ್, 2020

ವೈದ್ಯರು ಮತ್ತು ಇತರ ಸಿಬ್ಬಂದಿಗಳ ಕೊರತೆಯ ಬಗ್ಗೆ

ಶ್ರೀ ಗೋವಿಂದ ರಾಜು(ವಿಧಾನಸಭೆಯಿಂದ ಚುನಾಯಿತರಾದವರು) -

135 (117) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ಕೋಲಾರ ಜಿಲ್ಲಾ ಸಾರ್ವಜನಿಕ ಆಸ್ಪತ್ರೆಗೆ (ಎಸ್.ಎನ್.ಆರ್. ಆಸ್ಪತ್ರೆ) ಮಂಜೂರಾಗಿರುವ, ಕರ್ತವ್ಯ ನಿರ್ವಹಿಸುತ್ತಿರುವ ಮತ್ತು ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು; (ವೃಂದವಾರು ಸಂಪೂರ್ಣ ಮಾಹಿತಿ ನೀಡುವುದು)

(ಆ) ಹಾಲಿ ಕಾರ್ಯ ನಿರ್ವಹಿಸುತ್ತಿರುವ ಸಿಬ್ಬಂದಿಗಳಲ್ಲಿ ಸರ್ಕಾರಿ ಮತ್ತು ಅರೆಸರ್ಕಾರಿ ಹಾಗೂ ಗುತ್ತಿಗೆ ಆಧಾರದ ಮೇಲೆ ಕಾರ್ಯ ನಿರ್ವಹಿಸುತ್ತಿರುವ ಸಿಬ್ಬಂದಿಗಳ ಸಂಖ್ಯೆ ಎಷ್ಟು; (ವೃಂದವಾರು ಸಂಪೂರ್ಣ ಮಾಹಿತಿ ನೀಡುವುದು)

(ಇ) ಹಾಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳಲ್ಲಿ ಸರ್ಕಾರಿ ಮತ್ತು ಅರೆ ಸರ್ಕಾರಿ ಹಾಗೂ ಗುತ್ತಿಗೆ ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳಿಗೆ ಸರ್ಕಾರ ನಿಗಧಿಪಡಿಸಿ ನೀಡುತ್ತಿರುವ ವೇತನದ ಮೊತ್ತವೆಷ್ಟು; (ವೃಂದವಾರು ಸಂಪೂರ್ಣ ಮಾಹಿತಿ ನೀಡುವುದು)

(ಈ) ಈ ಆಸ್ಪತ್ರೆಯಲ್ಲಿ ಖಾಲಿ ಇರುವ ಹುದ್ದೆಗಳನ್ನು ಇದುವರೆವಿಗೂ ತುಂಬದೆ ಇರುವುದರಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಉ) ಹಾಗಿದ್ದಲ್ಲಿ, ಖಾಲಿ ಇರುವ ಹುದ್ದೆಗಳನ್ನು ಯಾವ ಕಾಲ ಮಿತಿಯೊಳಗಾಗಿ ತುಂಬಲಾಗುವುದು? (ವಿವರಗಳನ್ನು ನೀಡುವುದು)